# ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

## ಸಮೃದ್ಧಿ ಯೋಜನೆ

ಡಾ: ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮವು ಗ್ರಾಮೀಣ/ನಗರ ಪ್ರದೇಶಗಳಲ್ಲಿನ ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವಕ/ಯುವತಿಯರನ್ನು ಉದ್ಯಮ ಶೀಲರನ್ನಾಗಿಸಲು **"ಸಮೃದ್ಧಿ ಯೋಜನೆ"** ಅನುಷ್ಠಾನಗೊಳಿಸಲು ಉದ್ದೇಶಿಸಿದೆ. ಸದರಿಯೋಜನೆಯಡಿ ಪರಿಶಿಷ್ಟ ಜಾತಿಯ ನಿರುದ್ಯೋಗಿಗಳಿಗೆ ವಿವಿಧ ಸ್ವಯಂ ಉದ್ಯೋಗ ಘಟಕಗಳನ್ನು ಆರಂಭಿಸಲು ಹಾಗೂ ಲಾಭದಾಯಕವಾಗಿ ನಡೆಸಲು ಅಗತ್ಯವಾದ ಉದ್ಯಮಶೀಲತಾ ತರಬೇತಿ/ವೃತ್ತಿ ಕೌಶಲ್ಯ ತರಬೇತಿಯನ್ನು ನೀಡಿ ಮಾರುಕಟ್ಟೆ ವ್ಯವಸ್ಥೆಯೊಂದಿಗೆ ಘಟಕಗಳನ್ನು ಸೃಷ್ಟಿಸಲು ವ್ಯವಸ್ಥೆ ಮಾಡಲಾಗುವುದು. ಸದರಿಯೋಜನೆಯಡಿ ವಿವಿಧ ಉದ್ದೇಶಗಳಡಿ ಯೋಜನೆಗಳನ್ನು ರೂಪಿಸಲಾಗಿದೆ.

ಉತ್ತಮ ಮಾರುಕಟ್ಟೆ ಹೊಂದಿರುವ ಸರ್ಕಾರಿ ಮತ್ತು ಖಾಸಗಿ ಬ್ರಾಂಡೆಡ್ ಸಂಸ್ಥೆಗಳ ಸಹಯೋಗದಲ್ಲಿ ಫ್ರಾಂಚೈಸಿ/ಡೀಲರ್‌ಶಿಪ್ ವ್ಯವಸ್ಥೆಯೊಂದಿಗೆ ರಿಟೈಲ್ ವ್ಯಾಪಾರಿ ಮಳಿಗೆಗಳನ್ನು ಆರಂಭಿಸಲು ಅಗತ್ಯವಾದ ತಾಂತ್ರಿಕ ಬೆಂಬಲ ಹಾಗೂ ಆರ್ಥಿಕ ಬೆಂಬಲ ನೀಡಿ ಯಶಸ್ವಿ ಉದ್ದಿಮೆದಾರರನ್ನಾಗಿ ಮಾಡುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಈಗಾಗಲೇ ಸರ್ಕಾರಿ ಮತ್ತು ಬ್ರಾಂಡೆಡ್ ಸಂಸ್ಥೆಗಳ ಜೊತೆ ಸರ್ಕಾರವುಒಡಂಬಡಿಕೆ (ಎಂಓಯು) ಮಾಡಿಕೊಳ್ಳಲು ವ್ಯವಸ್ಥೆಯಾಗಿರುತ್ತದೆ. ಆಯ್ಕೆಯಾದ ಪ್ರತೀ ಫಲಾನುಭವಿಗೆ ಗರಿಷ್ಟ ರೂ.10.00ಲಕ್ಷಗಳವರೆಗೆ ಆರ್ಥಿಕ ಬೆಂಬಲ ಒದಗಿಸಲಾಗುತ್ತದೆ.

### ಸಾಮಾನ್ಯ ಅರ್ಹತೆಗಳು:

1. ಅರ್ಜಿದಾರರು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು.
2. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
3. ಅರ್ಜಿದಾರರು 21 ವರ್ಷದಿಂದ 50 ವರ್ಷದವರೆಗಿನ ವಯೋಮಾನದವರಾಗಿರಬೇಕು.
4. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನವು ರೂ.5,00,000/- ಮೀತಿಯೊಳಗಿರಬೇಕು.
5. ಅರ್ಜಿದಾರರು/ಕುಟುಂಬದ ಅವಲಂಭಿತ ಯಾವುದೇ ಸದಸ್ಯರು ಈ ಹಿಂದೆ ನಿಗಮ/ಸರ್ಕಾರದಿಂದ ರೂ.1,00,000/- ಮೇಲ್ಪಟ್ಟು ಸೌಲಭ್ಯ ಪಡೆದಿದ್ದಲ್ಲಿ, ಅಂತಹ ಫಲಾನುಭವಿಗಳು ಈ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ.
6. ಅರ್ಜಿದಾರರು ಘಟಕವನ್ನು ಸ್ಥಾಪಿಸಲು ಅವಶ್ಯವಿರುವ ಸ್ಥಳಾವಕಾಶವನ್ನು ಹೊಂದಿರಬೇಕು.

### ಷರತ್ತುಗಳು:

1. ಅರ್ಜಿದಾರರು ಆಯ್ಕೆ ಸಮಿತಿಯಲ್ಲಿ ಆಯ್ಕೆಯಾಗಬೇಕು.
2. ಆಯ್ಕೆಯಾದ ಫಲಾನುಭವಿಯೂ ಬ್ರಾಂಡೆಡ್ ಸಂಸ್ಥೆಗಳು ನೀಡುವ ತರಬೇತಿ ಕಡ್ಡಾಯವಾಗಿ ಪಡೆದುಅರ್ಹರಾಗಬೇಕು.
3. ಮಂಜೂರಾತಿ ಪಡೆದ ಫಲಾನುಭವಿಯು ಅನರ್ಹರೆಂದು ಕಂಡು ಬಂದಲ್ಲಿ ಮಂಜೂರಾತಿಯನ್ನು ಯಾವುದೇ ಹಂತದಲ್ಲಿರದ್ದು ಪಡಿಸಲಾಗುತ್ತದೆ.
4. ಘಟಕವನ್ನು ಆರಂಭಿಸಲು ಅವಶ್ಯವಿರುವ ಸ್ಥಳವನ್ನು ಹೊಂದಿರಬೇಕು.